# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **792** |
| ಸದಸ್ಯರ ಹೆಸರು | : | ಡಾ: ಯತೀಂದ್ರ ಎಸ್.<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 16-12-2024 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

*******

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಈವರೆಗೆ ಎಷ್ಟು ಸ್ಮಾರ್ಟ್ ಮೀಟರ್‌ಗಳನ್ನು ಅಳವಡಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು) | ವಿದ್ಯುತ್ ಸರಬರಾಜು ಕಂಪನಿ ವ್ಯಾಪ್ತಿಗಳಲ್ಲಿ ಪ್ರಸ್ತುತ ಯಾವುದೇ ಸ್ಮಾರ್ಟ್ ಮೀಟರ್‌ಗಳನ್ನು ಅಳವಡಿಸಿರುವುದಿಲ್ಲ. |
| ಆ) | ಸ್ಮಾರ್ಟ್ ಮೀಟರ್‌ಗಳನ್ನು ಅಳವಡಿಸಲು ವರ್ಷವಾರು ಗುರಿ ನಿಗದಿಪಡಿಸಲಾಗಿದೆಯೇ; (ವರ್ಷವಾರು ಮಾಹಿತಿ ನೀಡುವುದು) | ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ (ಕೆ.ಇ.ಆರ್.ಸಿ), ನಿರ್ದೇಶನ ಮತ್ತು ನಿಯಮಗಳಂತೆ "ಪ್ರಿ-ಪೇಯ್ಡ್ ಮೀಟರ್ ಅಳವಡಿಕೆಯು ತಾತ್ಕಾಲಿಕ ಸ್ಥಾವರಗಳಿಗೆ ಕಡ್ಡಾಯವಾಗಿದ್ದು, ಆದರೆ ಹೊಸ ಮತ್ತು ಅಸ್ತಿತ್ವದಲ್ಲಿರುವ ಎಲ್ಲಾ ಸ್ಥಾವರಗಳಿಗೆ ಸ್ಮಾರ್ಟ್ ಪ್ರಿ-ಪೇಯ್ಡ್ ಮೀಟರ್‌ಗಳ ಅಳವಡಿಕೆ ಗ್ರಾಹಕರಿಗೆ ಐಚ್ಛಿಕವಾಗಿರುತ್ತದೆ".<br>ಸ್ಮಾರ್ಟ್ ಪ್ರಿ-ಪೇಯ್ಡ್ ಮೀಟರ್ ಗಳನ್ನು ಒದಗಿಸಲು ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗಿದೆ:<br>**ಬೆಸ್ಕಾಂ** ಮತ್ತು **ಜೆಸ್ಕಾಂ**ಗಳ ವ್ಯಾಪ್ತಿಯಲ್ಲಿ ರಿಟೇಲ್ ಮಳಿಗೆಗಳನ್ನು ಸ್ಥಾಪಿಸುವುದಕ್ಕೆ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ.<br>**ಸೆಸ್ಕ್** ವ್ಯಾಪ್ತಿಯಲ್ಲಿ ತಾತ್ಕಾಲಿಕ ಸ್ಥಾವರಗಳಿಗೆ 25,000 ಸ್ಮಾರ್ಟ್ ಮೀಟರ್‌ಗಳನ್ನು ಅಳವಡಿಸಲು ಈಗಾಗಲೇ ದಿನಾಂಕ: 23.09.2024 ರಂದು ಕಾರ್ಯಾದೇಶ ನೀಡಲಾಗಿರುತ್ತದೆ.<br><br>ಗ್ರಾಹಕರು ಸ್ವಯಿಚ್ಛೆಯಿಂದ ಸ್ಮಾರ್ಟ್ ಮೀಟರ್‌ಗಳನ್ನು ಖರೀದಿಸಲು ಅನುವಾಗುವಂತೆ ವಿಭಾಗೀಯ ಮಟ್ಟದಲ್ಲಿ ಸ್ಮಾರ್ಟ್ ಮೀಟರ್ ಮಾರಾಟ ಕೇಂದ್ರಗಳನ್ನು ತೆರೆಯಲು ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br>**ಹೆಸ್ಕಾಂ ಮತ್ತು ಮೆಸ್ಕಾಂ ವ್ಯಾಪ್ತಿಯಲ್ಲಿ** ಎಂಪ್ಯಾನೆಲ್ಮೆಂಟ್/ ರಿಟೇಲ್ ಮಳಿಗೆಗಳನ್ನು ಸ್ಥಾಪಿಸುವ ಬಗ್ಗೆ ಪರಿಶೀಲನಾ ಹಂತದಲ್ಲಿದೆ. |
| ಇ) | ಕಳೆದ ಐದು ವರ್ಷಗಳಲ್ಲಿ ಈ ಕುರಿತು ಎಷ್ಟು ಅನುದಾನ ಒದಗಿಸಲಾಗಿದೆ; ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಪಾಲೆಷ್ಟು? (ಮಾಹಿತಿಯನ್ನು ಪ್ರತ್ಯೇಕವಾಗಿ ನೀಡುವುದು) | ಕಳೆದ ಐದು ವರ್ಷಗಳಲ್ಲಿ ಸ್ಮಾರ್ಟ್ ಮೀಟರ್‌ಗಳನ್ನು ಅಳವಡಿಸಲು ಕೇಂದ್ರ/ರಾಜ್ಯ ಸರ್ಕಾರಗಳಿಂದ ಯಾವುದೇ ಅನುದಾನ ಒದಗಿಸಿರುವುದಿಲ್ಲ. |

ಸಂಖ್ಯೆ: ಎನರ್ಜಿ 349 ಇಬಿಎಸ್ 2024

(ಕೆ.ಜೆ.ಜಾರ್ಜ್)
ಇಂಧನ ಸಚಿವರು